# ಕನ್ನಡ ಸಾಹಿತ್ಯ ಪರಿಷತ್ತು

ಸ್ಥಾಪನೆ : ೧೯೧೫

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೫೮೪ ಫ್ಯಾಕ್ಸ್ : ೨೬೫೨೩೫೮೬
http://www.kasapa.in e-mail : kannadaparishattu@gmail.com


ಕ್ರಮಸಂಖ್ಯೆ : ಕಸಾಪ / ದತ್ತಿ ಕಾರ್ಯಕ್ರಮ / ೨೦೨೧-೨೨ ದಿನಾಂಕ : ೧೦-೦೧-೨೦೨೨



ಇವರಿಗೆ

ಸಂಪಾದಕರು / ಮುಖ್ಯ ವರದಿಗಾರರು
........................................ಬೆಂಗಳೂರು

ಮಾನ್ಯರೆ,

**ಪತ್ರಿಕಾ ಹೇಳಿಕೆ – ಪ್ರಕಟಣೆ ಕೃಪೆಗಾಗಿ**

## ವಿಜಯವಾಣಿ ಸಂಪಾದಕರಾದ ಶ್ರೀ ಕೆ.ಎನ್. ಚನ್ನೇಗೌಡ
## ನಾಗಡಿಕೆರೆ–ಕಿಟ್ಟಪ್ಪ ರುಕ್ಮಿಣಿ ತೀರ್ಥಹಳ್ಳಿ ದತ್ತಿ ಪ್ರಶಸ್ತಿ

ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ **ದಿನಾಂಕ ೦೫-೦೧-೨೦೨೨** ರಂದು **ನಾಡೋಜ ಡಾ. ಮಹೇಶ ಜೋಶಿ ಅವರ ಅಧ್ಯಕ್ಷತೆಯಲ್ಲಿ** ನಡೆದ ಆಯ್ಕೆ ಸಮಿತಿ ಸಭೆಯಲ್ಲಿ **೨೦೨೨ನೆಯ ಸಾಲಿಗೆ "ನಾಗಡಿಕೆರೆ–ಕಿಟ್ಟಪ್ಪ ರುಕ್ಮಿಣಿ ತೀರ್ಥಹಳ್ಳಿ ದತ್ತಿ ಪ್ರಶಸ್ತಿ"**ಗೆ ವಿಜಯವಾಣಿ ಸಂಪಾದಕರಾದ **ಶ್ರೀ ಕೆ.ಎನ್. ಚನ್ನೇಗೌಡ** ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ಪ್ರಶಸ್ತಿಯ ಮೊತ್ತ **ರೂ. ೧೦,೦೦೦ (ಹತ್ತು ಸಾವಿರ ರೂಪಾಯಿ ಮಾತ್ರ)** ನಗದು, ಸ್ಮರಣಿಕೆ ಹಾಗೂ ಫಲ ತಾಂಬೂಲಗಳನ್ನು ಒಳಗೊಂಡಿರುತ್ತದೆ.

ಕಳೆದ ೨೫ ವರ್ಷಗಳಿಂದಲು ಪತ್ರಿಕೋದ್ಯಮದಲ್ಲಿ ಸೇವೆ ಸಲ್ಲಿಸುತ್ತಿರುವ ಶ್ರೀಯುತರು, ಅನೇಕ ವಾರಪತ್ರಿಕೆಗಳಲ್ಲಿ ಚಿಂತನಾ ಬರಹಗಳು, ರಾಜಕೀಯ ವಿಶ್ಲೇಷಣೆಯ ಜೊತೆಗೆ ಪ್ರಮುಖ ಲೇಖನಗಳನ್ನು ಸಹ ಬರೆದಿದ್ದಾರೆ. ಪ್ರಮುಖ ಪತ್ರಿಕೆಗಳಗಳಾದ ಹೊಸ ದಿಗಂತ, ಉಷಾಕಿರಣ, ಉದಯವಾಣಿ ಪತ್ರಿಕೆಗಳಲ್ಲಿ ಅನೇಕ ಜವಾಬ್ದಾರಿಯುತ ಕೆಲಸಗಳನ್ನು ನಿರ್ವಹಿಸಿದ್ದಾರೆ.

೨೦೧೨ರಲ್ಲಿ ಆರಂಭವಾದ ವಿಜಯವಾಣಿ ದಿನಪತ್ರಿಕೆಯಲ್ಲಿ, ಸೇವೆ ಸಲ್ಲಿಸುತ್ತಾ ಇದೀಗ ಸಂಪಾದಕರಾಗಿ ಕಾರ್ಯ ನಿರ್ವಹಿಸುತ್ತಿದ್ದು, ಅನೇಕ ಯುವ ಬರಹಗಾರರು, ಲೇಖಕರು, ಪತ್ರಕರ್ತರುಗಳಿಗೆ ಪ್ರೋತ್ಸಾಹ ನೀಡುತ್ತಾ ಅತ್ಯಂತ ಕ್ರಿಯಾಶೀಲರಾಗಿ ಪತ್ರಿಕೆಯನ್ನು ಮುನ್ನಡೆಸುತ್ತ ಬರುತ್ತಿದ್ದಾರೆ.

ಆಯ್ಕೆ ಸಮಿತಿ ಸಭೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿಗಳಾದ **ಶ್ರೀ ನೇ. ಭ ರಾಮಲಿಂಗಶೆಟ್ಟಿ**, ಗೌರವ ಕೋಶಾಧ್ಯಕ್ಷರಾದ **ಶ್ರೀ ಪಟೇಲ್‌ಪಾಂಡು** ಅವರುಗಳು ಉಪಸ್ಥಿತರಿದ್ದರು.

**(ನಾಡೋಜ ಡಾ. ಮಹೇಶ ಜೋಶಿ)**
ಅಧ್ಯಕ್ಷರು